# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1079 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ<br>(ಪದವೀಧರರ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 17/03/2025 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಅನುದಾನಿತ ಐ.ಟಿ.ಐ ತರಬೇತಿ ಕೇಂದ್ರಗಳ ನೌಕರರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯನ್ನು ಯಾವಾಗ ಜಾರಿಗೆ ತರಲಾಗಿದೆ; | ಸರ್ಕಾರಿ ಆದೇಶ ಸಂಖ್ಯೆ: ಕಾಇ 303 ಇಟಿಐ 2014, ದಿನಾಂಕ: 29.12.2014ರ ಆದೇಶದಲ್ಲಿ ಶ್ರೀ ಪಿ.ಎಸ್.ಎಸ್.ಥಾಮಸ್ ವರದಿಯ ಶಿಫಾರಸ್ಸಿನನ್ವಯ ರಾಜ್ಯದಲ್ಲಿನ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗೆ ಇರುವಂತೆ ಪಿಂಚಣಿ, ಗ್ರಾಚ್ಯುಯಿಟಿ, ಸೇವಾ ಸೌಲಭ್ಯಗಳು ಹಾಗೂ ಸೇವಾ ನಿಯಮಗಳನ್ನು ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ಸಿಬ್ಬಂದಿಗೆ ಭವಿಷ್ಯವರ್ತಿಯಾಗಿ (Prospective) ನೀಡಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.<br><br>ಪಿಂಚಣಿ ಮತ್ತು ಗ್ರಾಚ್ಯುಯಿಟಿ ಸೌಲಭ್ಯವು ರಾಜ್ಯದ 196 ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ದಿನಾಂಕ: 01.04.2006ರ ಪೂರ್ವದಲ್ಲಿ ನೇಮಕಾತಿ ಹೊಂದಿರುವ ಸಿಬ್ಬಂದಿಗೆ ಮಾತ್ರ ಅನ್ವಯಿಸುತ್ತದೆ. ಈ ಆದೇಶವು ಕರ್ನಾಟಕ ಸರ್ಕಾರದ (ಕಾರ್ಯಕಲಾಪಗಳ ನಿರ್ವಹಣೆ) ನಿಯಮಗಳು 1977ರ 17ನೇ ನಿಯಮದ (2)ನೇ ಉಪ ನಿಯಮದ ಪರಂತುಕದ ವ್ಯಾಪ್ತಿಯೊಳಗೆ ಬರುತ್ತದೆ ಮತ್ತು ಅದರಂತೆ ಹೊರಡಿಸಲಾಗಿದೆ.<br><br>ಸರ್ಕಾರಿ ಆದೇಶ ಸಂಖ್ಯೆ: ಕಾಇ 303 ಇಟಿಐ 2014 ದಿನಾಂಕ: 14.11.2016ರ ಆದೇಶದಲ್ಲಿ ಸೇವಾ ಸೌಲಭ್ಯಗಳಾದ 10 ವರ್ಷಗಳ ಕಾಲಬದ್ಧ ಮುಂಬಡ್ತಿ, 15 ವರ್ಷಗಳ ಸ್ವಯಂಚಾಲಿತ ವೇತನ ಮುಂಬಡ್ತಿ, 20-25 ವರ್ಷಗಳ ಹೆಚ್ಚುವರಿ ವೇತನ ಬಡ್ತಿ, ಪಿಂಚಣಿ, ಕುಟುಂಬ ಪಿಂಚಣಿ, ನಿವೃತ್ತಿ ಉಪದಾನ, ಮರಣ ಉಪದಾನ, ಗಳಿಕೆರಜೆ ನಗದೀಕರಣ, ಪರಿವರ್ತಿತ ಪಿಂಚಣಿ ಸೌಲಭ್ಯವನ್ನು ದಿನಾಂಕ: 29.12.2014ರಿಂದ ಭವಿಷ್ಯವರ್ತಿಯಾಗಿ ನೀಡಲಾಗಿರುತ್ತದೆ. |
| ಆ) | ಸದರಿಯವರಿಗೆ ಥಾಮಸ್ ನೇತೃತ್ವದ ವರದಿಯಂತೆ ಇದುವರೆವಿಗೆ ಇತರೆ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ನೀಡಿರುವ ಎಲ್ಲಾ ಸೌಲಭ್ಯಗಳನ್ನು ನೀಡದೆ ಇರಲು ಕಾರಣಗಳೇನು; (ವಿವರ ನೀಡುವುದು) | ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ನೌಕರರಿಗೆ ಶ್ರೀ ಥಾಮಸ್ ವರದಿಯಲ್ಲಿನ ಶಿಫಾರಸ್ಸುಗಳನ್ನು ಜಾರಿಗೊಳಿಸಲು 1997ರ ಅನುದಾನ ಸಂಹಿತೆಯನ್ನು ಪರಿಷ್ಕರಿಸಿ Karnataka Technical Education Institutions (Grant-in-aid Private Industrial Training Institute) Rules 2023ರ ಕರಡು ನಿಯಮಗಳನ್ನು ಕರ್ನಾಟಕ ರಾಜ್ಯಪತ್ರ |

--2

| | | |
|---|---|---|
| | | ವಿಶೇಷ ಪತ್ರಿಕೆಯಲ್ಲಿ ದಿನಾಂಕ: 30.01.2023ರಂದು ಪ್ರಕಟಿಸಿ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿರುತ್ತದೆ. ಸದರಿ ಕರಡು ನಿಯಮಗಳಿಗೆ ಒಟ್ಟು 512 ಆಕ್ಷೇಪಣೆಗಳು ಸ್ವೀಕೃತವಾಗಿದ್ದು, ಪರಿಶೀಲನಾ ಹಂತದಲ್ಲಿರುತ್ತವೆ. ಸದರಿ ಆಕ್ಷೇಪಣೆಗಳನ್ನು ಪರಿಶೀಲಿಸಿ ವರದಿ ನೀಡಲು ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯು ವರದಿ ನೀಡಿದ ನಂತರ ನಿಯಮಾನುಸಾರ ಮುಂದಿನ ಕ್ರಮವಹಿಸಲಾಗುವುದು. |
| ಇ) | ಸದರಿ ನೌಕರರಿಗೆ ಥಾಮಸ್ ವರದಿಯ ಶಿಫಾರಸಿನಂತೆ ಸೇವಾ ನಿಯಮಗಳನ್ನು ರೂಪಿಸದೆ ಇರುವುದರಿಂದ ಸಾವಿರಾರು ನೌಕರರು ಯಾವುದೇ ಸೌಲಭ್ಯಗಳಿಲ್ಲದೆ ವಂಚಿತರಾಗಿರುವುದರಿಂದ ಯಾವ ಕಾಲಮಿತಿಯಲ್ಲಿ ಸೇವಾ ನಿಯಮಗಳನ್ನು ರಚಿಸಿ ಎಲ್ಲ ಸೌಲಭ್ಯಗಳನ್ನು ನೀಡಲಾಗುತ್ತದೆ; (ವಿವರ ನೀಡುವುದು) | Karnataka Technical Education Institutions (Grant-in-aid Private Industrial Training Institute) Rules 2023ರ ಕರಡು ನಿಯಮಗಳನ್ನು ಕರ್ನಾಟಕ ರಾಜ್ಯ ಪತ್ರ ವಿಶೇಷ ಪತ್ರಿಕೆಯಲ್ಲಿ ದಿನಾಂಕ: 30.01.2023ರಂದು ಪ್ರಕಟಿಸಿ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿರುತ್ತದೆ. ಸದರಿ ಕರಡು ನಿಯಮಗಳಿಗೆ ಸ್ವೀಕೃತವಾಗಿರುವ ಆಕ್ಷೇಪಣೆಗಳು ಪರಿಶೀಲನಾ ಹಂತದಲ್ಲಿರುತ್ತವೆ. ಸದರಿ ಆಕ್ಷೇಪಣೆಗಳನ್ನು ಪರಿಶೀಲಿಸಿ ವರದಿ ನೀಡಲು ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯು ವರದಿ ನೀಡಿದ ನಂತರ ನಿಯಮಾನುಸಾರ ಮುಂದಿನ ಕ್ರಮವಹಿಸಲಾಗುವುದು. |
| ಈ) | 2006ರ ನಂತರ ಅನುದಾನಕ್ಕೊಳಪಡಿಸಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರರಿಗೆ ಶಿಕ್ಷಣ ಇಲಾಖೆಯಲ್ಲಿ ನೀಡುತ್ತಿರುವಂತೆ ನಿವೃತ್ತಿ ನಂತರ ರಜೆ ನಗದೀಕರಣ ಸೌಲಭ್ಯವನ್ನು ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸದರಿಯವರಿಗೆ ನಿವೃತ್ತಿ ನಂತರ ರಜೆ ನಗದೀಕರಣವನ್ನು ಯಾವ ಕಾಲಮಿತಿಯಲ್ಲಿ ನೀಡಲಾಗುತ್ತದೆ? | ಹೌದು.<br>ಪ್ರಸ್ತುತ ಜಾರಿಯಲ್ಲಿರುವ ನಿಯಮಗಳನುಸಾರ ದಿನಾಂಕ:01.04.2006ರ ನಂತರ ವೇತನಾನುದಾನಕ್ಕೆ ಒಳಪಟ್ಟು ನಿವೃತ್ತಿಯಾದ ಅನುದಾನಿತ ಸಿಬ್ಬಂದಿಗಳಿಗೆ ನಿವೃತ್ತಿ ನಂತರದ ಗಳಿಕೆ ರಜೆ ನಗದೀಕರಣ ಸೌಲಭ್ಯಗಳನ್ನು ನೀಡಲು ಅವಕಾಶಗಳಿರುವುದಿಲ್ಲ. |

ಸಂಖ್ಯೆ: ಕೌಉಜೀಇ 36 ಕೈತಪ್ರ 2025

(ಡಾ. ಶರಣಪ್ರಕಾಶ ಆರ್ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.